ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಅನುದಾನಿತ ಶಾಲಾ ಶಿಕ್ಷಕರಿಗೆ ಮತ್ತು ಉಪನ್ಯಾಸಕರಿಗೆ ಕಾಲ್ಪನಿಕ ವೇತನ ಬಡ್ತಿ ಕುರಿತು

ಡಾ|| ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :-

1483 (1682) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಅನುದಾನಿತ ಶಾಲಾ ಶಿಕ್ಷಕರಿಗೆ ಮತ್ತು ಉಪನ್ಯಾಸಕರಿಗೆ ಕಾಲ್ಪನಿಕ ವೇತನ ಬಡ್ತಿ ಮಂಜೂರಿಗೆ ಸಂಬಂಧಿಸಿದಂತೆ ವರದಿ ನೀಡಲು ಶ್ರೀ ಬಸವರಾಜ ಹೊರಟ್ಟಿಯವರ ಅಧ್ಯಕ್ಷತೆಯಲ್ಲಿ ರಚಿಸಿದ ಸಮಿತಿಯ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದೆಯೇ;

(ಆ) ಸಲ್ಲಿಸಿದ್ದಲ್ಲಿ, ಸದರಿ ಸಮಿತಿಯವರು ನೀಡಿರುವ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸಲು ಸರ್ಕಾರಕ್ಕೆ ಬೇಕಾಗುವ ಕಾಲಾವಕಾಶ ಎಷ್ಟು; ಈ ವಿಷಯದ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ?